KARN010004682026

M H ANNAYYANAVAR

Digitally signed by M H ANNAYYANAVAR
Date: 2026.03.13 15:56:09 +0530

| | | |
|---|---|---|
| Presented on | : | 02-03-2026 |
| Registered on | : | 02-03-2026 |
| Decided on | : | 13-03-2026 |
| Duration | : | 11 days |

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.

**:ಉಪಸ್ಥಿತರು:**

ಶ್ರೀಯುತ ಎಂ.ಹೆಚ್. ಅಣ್ಣಯ್ಯನವರ, ಬಿಕಾಂ.ಎಲ್.ಎಲ್.ಬಿ. (ವಿಶೇಷ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.

**ದಿನಾಂಕ 13 ನೇ ಮಾರ್ಚ್ ಮಾಹೆ 2026**

**ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ 150/2026**

ಅರ್ಜಿದಾರರು : ಶ್ರೀ ನಾಗರಾಜ್ ಕೃಷ್ಣಪ್ಪ,
(ಆರೋಪಿ) ಬಿನ್ ಬಿ.ಸಿ.ಕೃಷ್ಣಪ್ಪ,
ವಯಸ್ಸು ಸುಮಾರು 45 ವರ್ಷ.
ಎಸ್.ಪಿ. ಎಂಟರ್‌ಪ್ರೈಸಸ್ ಮಾಲೀಕರು, ಕ್ವಾರಿ,
ಮಾರಿಯಮ್ಮ ದೇವಸ್ಥಾನದ ಹತ್ತಿರ,
ಗೊಟ್ಟಿಗೆರೆ, ಕೆಂಬತಹಳ್ಳಿ,
ಬೆಂಗಳೂರು ದಕ್ಷಿಣ ಜಿಲ್ಲೆ.
(ಪರವಾಗಿ ಶ್ರೀ ಎ.ಎಸ್.ಸಿದ್ದರಾಜು., ವಕೀಲರು)

- ವಿರುದ್ಧ -

ಎದುರುದಾರರು: ಸರ್ಕಾರದ ಪರವಾಗಿ
ಆರ್.ಎಫ್.ಓ. ಕಗ್ಗಲಿಪುರ ವಲಯ,
ಬೆಂಗಳೂರು ದಕ್ಷಿಣ ಜಿಲ್ಲೆ.
(ಪರವಾಗಿ ಸರ್ಕಾರಿ ಅಭಿಯೋಜಕರು)

*****

## ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ **482** ರಡಿ ಜಾಮೀನು ಅರ್ಜಿಯ ಮೇಲೆ ಆದೇಶ

ಅರ್ಜಿದಾರರ ಪರ ವಕೀಲರು ಮಾನ್ಯ ನ್ಯಾಯಾಲಯದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 482 ರ ಅಡಿಯಲ್ಲಿ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಸಲ್ಲಿಸಿ, ಆರ್.ಎಫ್.ಒ. ಕಗ್ಗಲಿಪುರ ವಲಯ ಠಾಣಾಧಿಕಾರಿಯವರು ಅರ್ಜಿದಾರ ಯಾವುದೇ ರೀತಿಯ ಅಪರಾಧ ಮಾಡಿಲ್ಲದಿದ್ದರೂ ಸಹಿತ ಅರ್ಜಿದಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದು, ಅರ್ಜಿದಾರು ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು ಹಾಗೂ ನ್ಯಾಯಾಲಯ ವಿಧಿಸುವ ಷರತ್ತುಗಳನ್ನು ಪಾಲಿಸಲು ತಯಾರಿರುತ್ತಾರೆಂದು, ಆದ್ದರಿಂದ ಅರ್ಜಿದಾರ ಸಲ್ಲಿಸಿರುವ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಮಂಜೂರು ಮಾಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

2. ಸದರಿ ಅರ್ಜಿಗೆ ಸರಕಾರಿ ಅಭಿಯೋಜಕರು ತಕರಾರು ಸಲ್ಲಿಸಿ, ಅರ್ಜಿದಾರರ ಮೇಲೆ ಇರತಕ್ಕಂತಹ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿರುತ್ತದೆ. ಅರ್ಜಿದಾರರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದಲ್ಲಿ ಪುನಃ ಇಂತಹದೇ ಕೃತ್ಯ ಎಸಗುವ ಸಾಧ್ಯತೆ ಇರುತ್ತದೆ ಹಾಗೂ ತನಿಖೆಗೆ ಸಹಕರಿಸದೇ ಸಾಕ್ಷ್ಯಾಧಾರಗಳನ್ನು ನಾಶಪಡಿಸುವ, ಸಾಕ್ಷಿದಾರರಿಗೆ ಬೆದರಿಸುವ ತನಿಖೆಗೆ ಅಡ್ಡಿಯುಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು, ಈ ಮೇಲ್ಕಂಡ ಕಾರಣಗಳಿಂದಾಗಿ ನಿರೀಕ್ಷಣಾ ಜಾಮೀನು ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೇಳಿಕೊಂಡಿದ್ದಾರೆ.

3. ಅರ್ಜಿ, ತಕರಾರು ಹಾಗೂ ಉಭಯ ವಕೀಲರ ವಾದ ವಿವಾದವನ್ನು ಪರಿಶೀಲಿಸಲಾಗಿ, ಮಾನ್ಯ ನ್ಯಾಯಾಲಯಕ್ಕೆ ಈ ಕೆಳಕಂಡ ಅಂಶಗಳು ಚರ್ಚೆಗೆ ಬಂದಿರುತ್ತವೆ:-

1. ಅರ್ಜಿದಾರರ ಪರ ವಕೀಲರು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 482 ರಡಿ ಸಲ್ಲಿಸಿದ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಪುರಸ್ಕರಿಸಬಹುದೇ ?
2. ಯಾವ ಆದೇಶ ?

4. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ.

ಅಂಶ ನಂ.1 : ಸಕಾರಾತ್ಮಕವಾಗಿ

ಅಂಶ ನಂ.2 : ಅಂತಿಮ ಆದೇಶದಂತೆ ಈ ಕೆಳಕಂಡ ಕಾರಣಗಳಿಗಾಗಿ:

## ಕಾರಣಗಳು

5. ಅಂಶ ಸಂಖ್ಯೆ **1:** ಪಿರ್ಯಾದುದಾರರು ಕೊಟ್ಟ ದೂರಿನಂತೆ ಆರ್.ಎಫ್.ಒ. ಕಗ್ಗಲಿಪುರ ವಲಯ ಠಾಣಾಧಿಕಾರಿಗಳು ಅರ್ಜಿದಾರರ ವಿರುದ್ಧ ಆರ್.ಎಫ್.ಒ. ಕಗ್ಗಲಿಪುರ ವಲಯ ಠಾಣಾ ಅಪರಾಧ ಸಂಖ್ಯೆ 5/2026 ವನ್ಯಜೀವಿ (ಸಂರಕ್ಷಣಾ) ಕಾಯ್ದೆ ಕಲಂ.9, 2(16), 39, 50, 51, 55, 56 ಮತ್ತು 57 ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿರುತ್ತಾರೆ.

6. **ಪ್ರಕರಣದ ಸಂಕ್ಷಿಪ್ತ ಸಾರಾಂಶ:** ದೂರನ್ನು ಪರಿಶೀಲಿಸಲಾಗಿ, ದಿನಾಂಕ:26-12-2025 ರಂದು ಉಪ ವಲಯ ಅರಣ್ಯ ಅಧಿಕಾರಿ ಹಾಗೂ ಸಿಬ್ಬಂಧಿಯವರು ಗಸ್ತಿನಲ್ಲಿರುವಾಗ ಸುಲಿವಾರು ಸರ್ವೆ ನಂ.51 ರಲ್ಲಿ ಶಿವಕುಮಾರ್ ಇವರ ಜಮೀನಿನಲ್ಲಿ ಚಿರತೆ ಮೃತಪಟ್ಟಿರುವ ಮಾಹಿತಿ ಬಂದ ಮೇರೆಗೆ, ಸ್ಥಳದಲ್ಲಿ ನೋಡಿದಾಗ 3 ರಿಂದ 4

ವರ್ಷದ ಚಿರತೆ ಮೃತಪಟ್ಟಿರುವುದು ಕಂಡು ಬಂದಿರುತ್ತದೆ. ಈ ಕಾರಣದಿಂದ ಪಿರ್ಯಾದಿ ಅರ್ಜಿದಾರ ವಿರುದ್ಧ ಎದುರುದಾರ ಪೊಲೀಸ್ ಠಾಣೆಯಲ್ಲಿ ದೂರು ಕೊಟ್ಟಿರುತ್ತಾರೆ.

7. ಅರ್ಜಿದಾರರ ಮೇಲೆ ಇರುವಂತ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆ ಆಗಿದ್ದರೂ ಸಹಿತ ಜೀವವಾಧಿ ಶಿಕ್ಷೆ ಮತ್ತು ಮರಣ ದಂಡನೆ ವಿಧಿಸತಕ್ಕಂತಹ ಆಪಾದನೆ ಆಗಿರುವುದಿಲ್ಲ ಮತ್ತು ಮಾನ್ಯ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ಮಾಡುವಂತಹ ಆಪಾದನೆ ಆಗಿರುತ್ತದೆ.

8. ಕೇಸ್ ಡೈರಿ ಪರಿಶೀಲಿಸಲಾಗಿ, 3 ರಿಂದ 4 ವರ್ಷದ ಚಿರತೆ 2 ನೇ ಆರೋಪಿ ಸರ್ವೆ ನಂ.51 ರಲ್ಲಿ ಮೃತ ಪಟ್ಟಿದ್ದು, ಸದರಿ ಚಿರತೆಯನ್ನು ಪಶು ವೈದ್ಯರು ಮರಣೋತ್ತರ ಪರೀಕ್ಷೆ ಮಾಡಿದಾಗ ಚಿರತೆಯ ಹೊಟ್ಟೆಯ ಭಾಗದಲ್ಲಿ ರಕ್ತ ಹೆಪ್ಪುಗಟ್ಟಿದ್ದು ಪಕ್ಕದಲ್ಲಿ ಒಂದು ಕಲ್ಲು ಬಿದ್ದಿದ್ದು, ಕಲ್ಲಿಗೆ ರಕ್ತದ ಕಲೆಯಾಗಿದ್ದು ಹಾಗೂ ಚಿರತೆಯ ಕೂದಲುಗಳು ಸುತ್ತಿಕೊಂಡಿರುವುದರಿಂದ, ಪಕ್ಕದಲ್ಲಿ ಕಲ್ಲಿನ ಕ್ವಾರಿ ಇದ್ದು, ಅದು ಬ್ಲಾಸ್ಟ್ ಮಾಡುವಾಗ ಕಲ್ಲಿನ ತುಂಡು ಸಿಡಿದು ಚಿರತೆಗೆ ಬಡಿದು ಮೃತಪಟ್ಟಿರುತ್ತದೆ ಅಂತ ಅಭಿಪ್ರಾಯ ನೀಡಿರುತ್ತಾರೆ. ಚಿರತೆಯ ಸಾವಿಗೂ ಅರ್ಜಿದಾರರಿಗೂ ಯಾವುದೇ ರೀತಿಯ ಸಂಬಂಧ ಇರುವುದಿಲ್ಲ. ಚಿರತೆ 2 ನೇ ಆರೋಪಿ ಜಮೀನಿನಲ್ಲಿ ಮೃತಪಟ್ಟಿರುವುದರಿಂದ 2 ನೇ ಆರೋಪಿಯ ವಿರುದ್ಧ ಈ ಕೇಸು ದಾಖಲು ಮಾಡಿರುತ್ತಾರೆ ಹಾಗೂ ಅರ್ಜಿದಾರ ಕ್ವಾರಿ ಮಾಲೀಕನಾಗಿದ್ದು ಆ ಒಂದು ಕಾರಣದಿಂದ ಸದರಿ 2 ನೇ ಆರೋಪಿಯ ಜಮೀನಿನ ಪಕ್ಕದಲ್ಲಿ ಅರ್ಜಿದಾರ ಕ್ವಾರಿ ನಡೆಸುತ್ತಿರುವುದರಿಂದ ಈತನ ಮೇಲೂ ಸಹಿತ ಕೇಸು

ದಾಖಲು ಮಡಿದ್ದು ಸದರಿ ಚಿರತೆಗೆ ಅರ್ಜಿದಾರ ಸಬಂಧ ಇರುತ್ತಾರೆ ಅಂತ ಮೇಲ್ನೋಟಕ್ಕೆ ಕಂಡು ಬಂದಿರುವುದಿಲ್ಲ ಹಾಗೂ 2 ನೇ ಆರೋಪಿ ಕ್ರಿಮಿನಲ್ ಮಿಸ್ ನಂ.58/2026 ರಡಿಯಲ್ಲಿ ನಿರೀಕ್ಷಣಾ ಜಾಮೀನು ಪಡೆದುಕೊಂಡಿರುವುದರಿಂದ, ಸದರಿ ಅರ್ಜಿದಾರ ಸಮಾನತೆಯ ಆಧಾರದ ಮೇಲೆ ಜಾಮೀನು ಪಡೆಯಲು ಅರ್ಹರಿರುತ್ತಾರೆ. ಇಂತಹ ಸಂದರ್ಭದಲ್ಲಿ ಅರ್ಜಿದಾರರು ಷರತ್ತಿನ ಆಧಾರದ ಮೇಲೆ ನಿರೀಕ್ಷಣಾ ಜಾಮೀನು ಪಡೆಯಲು ಅರ್ಹರಿರುತ್ತಾರೆ.

9. ಅರ್ಜಿದಾರರು ಬೆಂಗಳೂರು ದಕ್ಷಿಣ ಜಿಲ್ಲಾ ರಹವಾಸಿಯಾಗಿದ್ದು ಚರ ಮತ್ತು ಸ್ಥಿರ ಆಸ್ತಿಗಳನ್ನು ಹೊಂದಿದ್ದು ತಲೆ ಮರೆಸಿಕೊಳ್ಳುವ ಸಾಧ್ಯತೆ ಇರುವುದಿಲ್ಲ. ಇಂತಹ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಅರ್ಜಿದಾರರಿಗೆ ಷರತ್ತಿನ ಆಧಾರದ ಮೇಲೆ ನಿರೀಕ್ಷಣಾ ಜಾಮೀನನ್ನು ಮಂಜೂರು ಮಾಡುವುದು ಸೂಕ್ತ ಅಂತ ನ್ಯಾಯಾಲಯಕ್ಕೆ ಕಂಡುಬಂದಿರುವುದರಿಂದ ಸದರಿ ಅಂಶ ಸಂಖ್ಯೆ ***1*** ನ್ನು ಸಕಾರಾತ್ಮಕವಾಗಿ ಉತ್ತರಿಸಲಾಯಿತು.

10. <u>ಅಂಶ ಸಂಖ್ಯೆ **2**</u>**:** ಅಂಶ ಸಂಖ್ಯೆ 1 ಕ್ಕೆ ನೀಡಿದ ಕಾರಣ ಹಾಗೂ ಉತ್ತರಗಳಿಗಾಗಿ ಈ ಕೆಳಕಂಡಂತೆ ಆದೇಶಃ

<u>ಆದೇಶ</u>

ಅರ್ಜಿದಾರರ ಪರ ವಕೀಲರು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 482 ಅಡಿಯಲ್ಲಿ ಸಲ್ಲಿಸಿದ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಪುರಸ್ಕರಿಸಲಾಗಿದೆ.

ಒಂದು ವೇಳೆ ಎದುರುದಾರ ಪೊಲೀಸರು ಅರ್ಜಿದಾರರನ್ನು ದಸ್ತಗಿರಿ ಮಾಡಿದ್ದಲ್ಲಿ ಸದರಿ ಅರ್ಜಿದಾರರಿಂದ ತಲಾ ರೂ.50,000/- (ಐವತ್ತು ಸಾವಿರ ರೂಪಾಯಿ) ಸ್ವ ಮುಚ್ಚಳಿಕೆ ಪತ್ರ ಹಾಗೂ ಅಷ್ಟೇ ಮೊತ್ತದ ಒಬ್ಬ ಸೂಕ್ತ ಜಾಮೀನುದಾರರನ್ನು ಪಡೆದುಕೊಂಡು ಜಾಮೀನಿನ ಮೇಲೆ ಬಿಡುಗಡೆ ಮಾಡಲು ಆದೇಶಿಸಲಾಗಿದೆ ಹಾಗೂ ಅರ್ಜಿದಾರ ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು.

<u>ಷರತ್ತುಗಳು</u>

1. ಅರ್ಜಿದಾರರು ತಮ್ಮ ವಿಳಾಸಕ್ಕೆ ಸಂಬಂಧಪಟ್ಟಂತೆ ಚುನಾವಣಾ ಗುರುತಿನ ಚೀಟಿ/ಆಧಾರ್ ಕಾರ್ಡ್ ಹಾಗೂ ಇತರೆ ದಾಖಲೆಯನ್ನು ಹಾಜರುಪಡಿಸತಕ್ಕದ್ದು.
2. ಅರ್ಜಿದಾರರು ಅಭಿಯೋಜಕ ಪಕ್ಷದ ಸಾಕ್ಷಿಗಳನ್ನು ಯಾವುದೇ ರೀತಿಯಿಂದಲೂ ಹೆದರಿಸತಕ್ಕದ್ದಲ್ಲ.
3. ನ್ಯಾಯಾಲಯಕ್ಕೆ ತಪ್ಪದೇ ಎಲ್ಲಾ ವಿಚಾರಣೆ ದಿನಾಂಕ ದಂದು ಹಾಜರಿರತಕ್ಕದ್ದು.
4. ಅರ್ಜಿದಾರರು ಪುನಃ ಇಂತಹ ಪ್ರಕರಣಗಳಲ್ಲಿ ಭಾಗಿಯಾಗತಕ್ಕದ್ದಲ್ಲ.
5. ಆದೇಶ ಆದ 15 ದಿವಸದೊಳಗೆ ಅರ್ಜಿದಾರರು ಸಂಬಂಧಪಟ್ಟ ದಂಡಾಧಿಕಾರಿ ನ್ಯಾಯಾಲಯಕ್ಕೆ ಹಾಜರಾಗಿ ಜಾಮೀನು ಪಡೆಯಲು ಆದೇಶಿಸಲಾಗಿದೆ.

ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘನೆ ಮಾಡಿದಲ್ಲಿ ತಕ್ಷಣವೇ ಜಾಮೀನು ಅರ್ಜಿ ವಜಾ ಆಗತಕ್ಕದ್ದು ಅಂತಾ ಆದೇಶ ಮಾಡಲಾಗಿದೆ.

*(ಈ ಆದೇಶದ ಉಕ್ತಲೇಖನವನ್ನು ಶೀಘ್ರಲಿಪಿಗಾರ್ತಿ ಗ್ರೇಡ್ I ರವರಿಗೆ ನೇರವಾಗಿ ಗಣಕಯಂತ್ರ ಪರದೆಯ ಮೇಲೆ ನೀಡಿದ್ದು, ನಂತರ ಅವರು ಗಣಕೀಕರಿಸಿದ್ದನ್ನು ಓದಿ, ತಿದ್ದಿ ಇದೇ ದಿನಾಂಕ **13** ನೇ ಮಾರ್ಚ್ ಮಾಹೆ **2026** ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

(ಎಂ.ಹೆಚ್.ಅಣ್ಣಯ್ಯನವರ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಮನಗರ.